# ವಾರ್ಡ್ ಹಂತದ ಸಮಿತಿ ಸಭೆ

## ವಾರ್ಡ್ ಸಂಖ್ಯೆ: 136

17-10-2020 ರಂದು ಶನಿವಾರ ಬೆಳಿಗ್ಗೆ 11.00 ಘಂಟೆಗೆ ವಾರ್ಡ್ ಸಂಖ್ಯೆ: 136 ಜೆ.ಜೆ.ಆರ್ ನಗರ ವಾರ್ಡ್ ಹಂತದ ಸಮಿತಿ ಸಭೆಯನ್ನು ಶ್ರೀ ದೇವರಾಜ್. ಸಹಾಯಕ ಕಾರ್ಯಪಾಲಕ ಅಭಿಯಂತರರು( ಯೋಜನೆ-ಪಶ್ಚಿಮ) ಬಿ.ಬಿ.ಎಂ.ಪಿ ಹಾಗೂ ಅಧ್ಯಕ್ಷರು ಮತ್ತು ವಾರ್ಡ್‌ನ ನೋಡೆಲ್ ಅಧಿಕಾರಿ ವಾರ್ಡ್ ಸಂಖ್ಯೆ 136 ರವರ ಅಧ್ಯಕ್ಷತೆಯಲ್ಲಿ ಸಭೆಯನ್ನು ನಡೆಸಲಾಯಿತು.

ಬೃಹತ್ ಬೆಂಗಳೂರು ಮಹಾನಗರ ಪಾಲಿಕಯಲ್ಲಿ ಚುನಾಯಿತ ಪ್ರತಿನಿಧಿ ಅಧಿಕಾರ ಅವಧಿಯು ದಿನಾಂಕ: 10-09-2020ಕ್ಕೆ ಮುಕ್ತಾಯವಾಗಿದ್ದು, ಬಿ.ಬಿ.ಎಂ.ಪಿ ಪ್ರತಿ ವಾರ್ಡ್‌ಗೆ ನೋಡೆಲ್ ಅಧಿಕಾರಿ ನೇಮಕಾತಿ ಮತ್ತು ವಾರ್ಡ್ ಹಂತದ ಸಮಿತಿ ರಚಿಸಿದ್ದು. ವಾರ್ಡ್‌ಗೆ ಸಂಬಂಧಿಸಿದಂತೆ ಸಾರ್ವಜನಿಕರ ಹಿತರಕ್ಷಣೆ ಗಾಗಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಬಗ್ಗೆ ಚರ್ಚಿಸಲು ಸಭೆಗೆ ಅಹ್ವಾನಿಸಿದ ಮಾನ್ಯ ಅಧ್ಯಕ್ಷರಿಗೆ ಮತ್ತು ಸಮಿತಿಯ ಸದಸ್ಯರುಗಳಿಗೆ ಸಮಿತಿಯ ಕಾರ್ಯದರ್ಶಿ ಸಭೆಗೆ ಸ್ವಾಗತ ಕೋರುತ್ತಾ ಸಮಿತಿಯ ಅಧ್ಯಕ್ಷರಾದ ಶ್ರೀ ದೇವರಾಜ್ ರವರ ಅಧ್ಯಕ್ಷತೆಯಲ್ಲಿ ಸಭೆಯನ್ನು ಮುನ್ನಡೆಸಲಾಯಿತು.

### <u>ಸಭೆಯಲ್ಲಿ ಚರ್ಚಿಸಲಾದ ವಿಷಯಗಳು</u>

ಅಧ್ಯಕ್ಷರು: ವಾರ್ಡ್ 136ರ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತೀರುವ ಮಾರ್ಷಲ್ ವಾರ್ಡಿನ ವಾಣಿಜ್ಯ ಚಟುವಟಿಕೆಗಳು ನಡೆಯುವ ಸ್ಥಳಗಳಲ್ಲಿ ಕಸ ಹಾಕುವ ಮತ್ತು ರಾತ್ರಿ ಸಮಯದಲ್ಲಿ ರಸ್ತೆಯಲ್ಲಿ ಡೆಬ್ರೀಸ್ ಸುರಿಯುತ್ತಿರುವವರನ್ನು ಗುರ್ತಿಸಿ ದಂಡ ವಿಧಿಸುವಂತೆ ಸಭೆಯಲ್ಲಿ ಸೂಚಿಸಿದರು

ಅಧ್ಯಕ್ಷರು : ವಾರ್ಡ್ ಪರಿಶೀಲಿಸಿ ರಸ್ತೆಯಲ್ಲಿ ಗುಂಡಿ ಮತ್ತು ಕತ್ತರಿಸಿದ ಭಾಗಗಳನ್ನು ತುರ್ತಾಗಿ ಮುಚ್ಚಲು ಸೂಚಿಸಿದರು

........2.

Scanned with CamScanner

ಅಧ್ಯಕ್ಷರು: ಮಳೆಗಾಲದಲ್ಲಿ ಚರಂಡಿಯ ಶೋಲ್ಡರ್ ಡ್ರೈನ್ಗಳ್ಳು ಶುಚಿಗೊಳಿಸಲು ಕ್ರಮ ಕೈಗೊಳ್ಳವಂತೆ ತಿಳಿಸಿದರು.

ಅಧ್ಯಕ್ಷರು: ಸಾರ್ವಜನಿಕರಿಂದ ಬರುವ ದೂರುಗಳನ್ನು ತುರ್ತಾಗಿ ಪರಿಹರಿಸುವಂತೆ ಸೂಚಿಸಿದರು.

ಅಧ್ಯಕ್ಷರು: 2019-20 ಸಾಲಿನಲ್ಲಿ ಬಾಕಿ ಇರುವ ಕಾಮಗಾರಿಯನ್ನು ಪೂರ್ಣಗೊಳಿಸುವಂತೆ ಸಭೆಯಲ್ಲಿ ಸೂಚಿಸಿದರು

ಮಾನ್ಯ ಆಧ್ಯಕ್ಷರಲ್ಲಿ ಸಂಚಾಲಕರು ಹಾಗೂ ಸಹಾಯಕ ಅಭಿಯಂತರರು ಈ ಮೇಲ್ಕಂಡ ಪ್ರಶ್ನೆಗಳ ಬಗ್ಗೆ ಸಂಬಂಧಿಸಿದ ವಿವರಗಳನ್ನು ಅಧ್ಯಕ್ಷರ ಗಮನಕ್ಕೆ ತರುತ್ತಾ ಪ್ರತಿ ದಿನ ಪರಿಶೀಲಿಸಿ ಈ ಬಗ್ಗೆ ಸಮರ್ಪಕವಾಗಿಕಾರ್ಯನಿರ್ವಹಿಸುವುದಾಗಿ ತಿಳಿಸಿದರು

ಅಧ್ಯಕ್ಷರು ಕೋವಿಡ್-19 ಸಂಬಂಧ ಸೋಂಕು ಹರಡುವುದನ್ನು ತಡೆಗಟ್ಟ ಮುಖಗವಸವನ್ನು ಕಡ್ಡಯವಾಗಿ ಬಳಸಲು ಕ್ರಮ ವಹಿಸುವಂತೆ ಹಿರಿಯ ಪರಿವೀಕ್ಷಕರಿಗೆ ಸೂಚಿಸಿಲಾಯಿತು

ಅಧ್ಯಕ್ಷರು: ಕೋವಿಡ್-19 ಸಂಬಂಧ ಸೋಂಕು ಹರಡುವುದನ್ನು ತಡೆಗಟ್ಟಲು ಪ್ರತಿ ನಿತ್ಯಾ ಸರ್ಕಾರದ ಆದೇಶದಂತೆ ಹೆಚ್ಚಿನ ಪ್ರಮಾನದಲ್ಲಿ ಕೋವಿಡ್ ಟೆಸ್ಟ್ ಮಾಡಿಸುವಂತೆ ಹಿರಿಯ ಪರಿವೀಕ್ಷಕರಿಗೆ ಸೂಚಿಸಿಲಾಯಿತು

ಅಧ್ಯಕ್ಷರು: ಕೋವಿಡ್-19 ಟೆಸ್ಟ್ ಮಾಡಿಸಲು ಹೆಚ್ಚಿನ ಪ್ರಮಾಣದಲ್ಲಿ ಸಾರ್ವಜನಿಕರು ಬರದೇ ಇರುವುದರಿಂದ ಸಾರ್ವಜನಿಕರಿಗೆ ಹರಿವು ಮೂಡಿಸಲು ಕಾರ್ಯಕ್ರಮವನ್ನು ಹಮ್ಮಿಕೊಳ್ಳುವಂತೆ ಹಾಗೂ ಕೋವಿಡ್-19 ಸೊಂಕು ತಗಲಿರುವ ಅಕ್ಕ ಪಕ್ಕದ ಮನೆಯವರಿಗೆ ಟೆಸ್ಟ್ ಮಾಡಿಸುವಂತೆ ಹರಿ ಮೂಡಿಸಲು ಸಭೆಯಲ್ಲಿ ಹಾಜರಿದ್ದ ಆರೋಗ್ಯ ಇಲಾಖೆ ಸಿಬ್ಬಂದಿಗಳಿಗೆ ಸೂಚಿಸಿದರು.

ಅಧ್ಯಕ್ಷರು: ಅಂಬುಲೆನ್ಸ್ ವ್ಯವಸ್ಥೆಯನು ಉತ್ತಮ ರೀತಿಯಲ್ಲಿ ನಿರ್ವಹಣೆ ಬಗ್ಗೆ ಸಭೆಯಲ್ಲಿ ಸೂಚಿಸಿದರು

ಅಧ್ಯಕ್ಷರು : ವಾರ್ಡಿನಲ್ಲಿ ಕಾರ್ಯನಿರ್ವಹಿಸುತ್ತೀರುವ ಪೌರ ಕಾರ್ಮಿಕರಿಗೆ 15 ದಿನಗಳಿಗೊಮ್ಮೆ ಕೋವಿಡ್-19 ಟೆಸ್ಟ್ ಮಾಡಲು ಸಂಬಂಧ ಪಟ್ಟ ಅಧಿಕಾರಿಗಳಿಗೆ ಸೂಚಿಸಿದರು

Scanned with CamScanner

ಆರೋಗ್ಯ ವೈದ್ಯಾಧಿಕಾರಿಗಳು: ವಾರ್ಡ್ ವ್ಯಾಪ್ತಿಯಲ್ಲಿ ಆಟೋವನ್ನು ಉಪಯೋಗಿಸಿಕೊಂಡು ಜಾಗೃತಿ ಮೂಡಿಸುತ್ತಿರುವುದಾಗಿ ಸಭೆಯಲ್ಲಿ ತಿಳಿಸುತ್ತಾ ತಾವು ನೀಡಿರುವ ಸೂಚನೆಗಳನ್ನು ಪಾಲಿಸುವುದಾಗಿ ಸಭೆಯಲ್ಲಿ ಅಧ್ಯಕ್ಷರ ಗಮನಕ್ಕೆ ತಂದರು

ಅಧ್ಯಕ್ಷರು: ಬಿಡಬ್ಲೂಎಸ್ಎಸ್‌ಬಿ ಅಧಿಕಾರಿಗಳಿಗೆ ಒಳಚರಂಡಿ ಕಾಮಗಾರಿಗಳನ್ನು ಜರೂರಾಗಿ ನಿರ್ವಹಿಸುವಂತೆ ಸೂಚಿಸಿದರು

ಬಿಡ್ಲೂಎಸ್ಎಸ್‌ಬಿ ಅಧಿಕಾರಿ: ವಾರ್ಡಿಗೆ ಸಂಬಂಧಿಸಿದ ಒಳಚರಂಡಿ ಕಾಮಗಾರಿಗಳನ್ನು ಶೀರ್ಘವಾಗಿ ನಡೆಸಲಾಗುವುದು ಮತ್ತು ಸೀಲ್ ಡೌನ್ ಏರಿಯದಲ್ಲಿ. ಒಳಚರಂಡಿ ವ್ಯವಸ್ಥೆಯ ನ್ಯೂನ್ಯತೆ ಬಗ್ಗೆ ಹೆಚ್ಚಿನ ಆಧ್ಯತೆ ನೀಡಿ ಸಮರ್ಪಕವಾಗಿ ಕಾರ್ಯವನ್ನು ನಿರ್ವಹಿಸಲಾಗುವುದೆಂದು ಸಭೆಯಲ್ಲಿ ತಿಳಿಸಿದರು.

ಅಧ್ಯಕ್ಷರು: ಸಾರ್ವಜನಿಕರಿಂದ ಹೆಚ್ಚಿನ ಪ್ರಮಾಣದಲ್ಲಿ ವಿದ್ಯೂತ್ ಸಮಸ್ಯೆಗಳ ಬಗ್ಗೆ ದೂರುಗಳು ಬರುತ್ತೀರುವ ಸಭೆಯಲ್ಲಿ ಹಾಜರಿದ್ದ ಬೇಸ್ಕಂ ಅಧಿಕಾರಿಗಳಿಗೆ ತಿಳಿಸುತ್ತಾ ಸೂಕ್ತ ಕ್ರಮ ಕೈಗೊಳ್ಳುವಂತೆ ತಿಳಿಸಿದರು

ಬೇಸ್ಕಂ ಆದಿಕಾರಿ ಸದರಿ ವಿಷಯದ ಬಗ್ಗೆ ಪರಿಶೀಲಿಸಿ ಕ್ರಮ ಕೈಗೊಂಡು ಸಾರ್ವಜನಿಕರಿಗೆ ತೊಂದರೆಯಾಗದಂತೆ ಕಾರ್ಯವನ್ನು ನಿರ್ವಹಿಸುವುದಾಗಿ ತಿಳಿಸಿದರು.

ಅಧ್ಯಕ್ಷರು: ತೆರಿಗೆ ಪಾವತಿ ಮಾಡದೆ ಬಾಕಿ ಉಳಿಸಿಕೊಂಡಿರುವ ಆಸ್ತಿ ದಾರರಿಗೆ ಬಾಕಿ ತೆರಿಗೆ ವಸೂಲಾತಿ ಮಾಡಲು ಬಿ.ಬಿ.ಎಂ.ಪಿ ಆದೇಶದಂತೆ ನೋಟಿಸ್ ಜಾರಿ ಮಾಡಿ ಕ್ರಮ ಕೈಗೊಳ್ಳಲು ಸೂಚಿಸಿದರು

ಕಂದಾಯ ಪರಿವೀಕ್ಷಕರು ಬಿ.ಬಿ.ಎಂ.ಪಿ ಆದೇಶದಂತೆ ಈಗಾಗಲೇ ಹಲವರಿಗೆ ನೋಟಿಸ್ ಜಾರಿ ಮಾಡಿದ್ದು, ತೆರಿಗೆ ವಸೂಲಾತಿಯನ್ನು ಮಾಡುತ್ತೀರುವುದಾಗಿ ಸಭೆಯಲ್ಲಿ ತಿಳಿಸಿದರು.

ಅಧ್ಯಕ್ಷರು: ವಾರ್ಡ್ ವ್ಯಾಪ್ತಿಯಲ್ಲಿ ಮುಖಗವಸುಗಳನ್ನು ಧರಿಸದೇ ತಿರುಗುತ್ತಿರುವವರನ್ನು ಗುರ್ತಿಸಿ ಸ್ಥಳಿಯ ಪೋಲೀಸರ ಸಹಾಯದೊಂದಿಗೆ ದಂಡವಿಧಿಸುವಂತೆ ಸೂಚಿಸಿದರು.

-4

Scanned with CamScanner

ಅಧ್ಯಕ್ಷರು: ಕಸವನ್ನು ಮೂಲ ಸ್ಥಳದಲ್ಲಿಯೇ ಹಸಿ ಮತ್ತು ಒಣ ಕಸವನ್ನು ವಿಂಗಡಿಸುವಂತೆ ಅರಿವು ಮುಡಿಸಲು ಸಭೆಯಲ್ಲಿ ಸೂಚಿಸಿದರು

ಅಧ್ಯಕ್ಷರು: ಮನೆ ಮನೆಗಳಿಂದ ಹಾಗೂ ವಾಣಿಜ್ಯ ಸಂಕೀರ್ಣಗಳಿಂದ ದಿನ ನಿತ್ಯಾ ವಿಂಗಡಿಸಿದ ಕಸವನ್ನು ನೀಡುತ್ತೀರುವ ಬಗ್ಗೆ ಪರಿಶೀಲಿಸಿ ಖಾತ್ರಿ ಮಾಡಿಕೊಳ್ಳುಲು ಸಭೆಯಲ್ಲಿ ತಿಳಿಸಿದರು.

ಅಧ್ಯಕ್ಷರು : ವಾರ್ಡಿನಲ್ಲಿರುವ ಬ್ಲಾಕ್ ಸ್ಪಾಟ್‌ನಲ್ಲಿ ಕಸ ವಿಲೇವರಿ ಮಾಡುವ ಗಾಡಿಗಳನ್ನು ನಿಲ್ಲಿಸಿರುವುದರಿಂದ ಕಸ ಸಂಗ್ರಾಣೆ ಹೆಚ್ಚುಗುತ್ತಿರುವ ಬಗ್ಗೆ ಸಭೆಯಲ್ಲಿ ತಿಳಿಸಿ ಸೂಕ್ತ ಕ್ರಮ ಕೈಗೊಳ್ಳಲು ಸಭೆಯಲ್ಲಿ ಸೂಚಿಸಿದರು.

ಅಧ್ಯಕ್ಷರು : ಪ್ರತಿ ದಿನ ಬೆಳಿಗ್ಗೆ ಬಿ.ಬಿಎಂ.ಪಿ ಪೌರ ಕಾರ್ಮಿಕರು ಮತ್ತು ಗುತ್ತಿಗೆ ಪೌರ ಕಾರ್ಮಿಕರ ಹಾಜರಾತಿಯನ್ನು ಪಡೆದು ನೋಡಲ್ ಅಧಿಕಾರಿಗಳಿಗೆ ಸಲ್ಲಿಸುವಂತೆ ಸಭೆಯಲ್ಲಿ ಸೂಚಿಸಿದರು

ಮಾನ್ಯ ಆಧ್ಯಕ್ಷರಲ್ಲಿ ಕಿರಿಯ ಆರೋಗ್ಯ ಪರಿವೀಕ್ಷಕರು ಈ ಮೇಲ್ಕಂಡ ಪ್ರಶ್ನೆಗಳ ಬಗ್ಗೆ ಸಂಬಂಧಿಸಿದ ವಿವರಗಳನ್ನು ಅಧ್ಯಕ್ಷರ ಗಮನಕ್ಕೆ ತರುತ್ತಾ ಪ್ರತಿ ದಿನ ಪರಿಶೀಲಿಸಿ ಪೂರ್ಣ ಮಾಹಿತಿಯನ್ನು ತಮ್ಮ ಗಮನಕ್ಕೆ ತರುವುದಾಗಿ ಸಭೆಯಲ್ಲಿ ತಿಳಿಸಿದರು

ಇಂದಿನ ಸಭೆ0ುಲ್ಲಿ ಚರ್ಚಿಸಿದ ಹಾಗೂ ನಿರ್ಣಯಗಳನ್ನು ಕಾರ್ಯದರ್ಶಿ ಮತ್ತು ಸಂಚಾಲಕರು. ಸಭೆಯ ನಡಾವಳಿಗಳ ಪುಸ್ತಕದಲ್ಲಿ ದಾಖಲಿಸಿದರು. ವಂದನಾರ್ಪಣೆ ಮಾಡುವುದರ ಮೂಲಕ ಇಂದಿನ ಸಭೆಯನ್ನು ಮುಕ್ತಾಯಗೊಳಿಸಿದರು.

-5

Scanned with CamScanner

# ಹಾಜರಿದ್ದ ವಾರ್ಡ್ ಕಮಿಟಿ ಸದಸ್ಯರು

| ಕ್ರಮ ಸಂಖ್ಯೆ | ವಾರ್ಡ್ ಹಂತದ ಸಮಿತಿ ಹಾಗೂ ಸದಸ್ಯರುಗಳ ಹೆಸರು ಮೊಬೈಲ್ ಸಂಖ್ಯೆ | | ಸಹಿ |
|---|---|---|---|
| 1 | ಶ್ರೀ ದೇವರಾಜ್ ಸಹಾಯಕ ಕಾರ್ಯಪಾಲಕ ಅಭಿಯಂತರರು (ಯೋಜನೆ ಪಶ್ಚಿಮ) ದೂ. 9448970836 | ಅಧ್ಯಕ್ಷರು ಮತ್ತು ವಾರ್ಡ್‌ನ ನೋಡಲ್ ಅಧಿಕಾರಿ | |
| 2 | ಶ್ರೀ ಗಿರಿಧರ್ ಸಹಾಯಕ ಅಭಿಯಂತರರು, ವಾರ್ಡ್ ಸಂಖ್ಯೆ: 136 ಬಿ.ಬಿ.ಎಂ.ಪಿ ದೂ. 8618436036 | ಸದಸ್ಯ ಕಾರ್ಯದರ್ಶಿ | |
| 3 | ಎನ್. ಲಕ್ಷ್ಮಿ ನರಸಿಂಹಯ್ಯ ದೂ. 9845563157 ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ –136 | ಸದಸ್ಯರು | 136 |
| 4 | ಸಹಾಯಕ ಕಾರ್ಯಪಾಲಕ ಅಭಿಯಂತರರ(ಕಾಮಗಾರಿ) ಜೆ.ಜೆ.ಆರ್ ನಗರ ಉಪ ವಿಭಾಗದ ಪ್ರತಿನಿಧಿ ಶ್ರೀ ಬಾಬು (ಕೆಲಸ ಪರಿವೀಕ್ಷಕರು) 9342582372 | ಸದಸ್ಯರು | V. |
| 5 | ಆರೋಗ್ಯಾಧಿಕಾರಿಗಳು, ಚಾಮರಜಪೇಟೆ ವಿಭಾಗ ರವರ ಪ್ರತಿನಿಧಿ, ಎನ್.ಲಕ್ಷ್ಮಿ ನರಸಿಂಹಯ್ಯಿತ ದೂ. 9845563157 | ಸದಸ್ಯರು | |
| 6 | ಶ್ರೀ ಉಮೇಶ್ ವಾರ್ಡ್ ಪ್ರದೇಶದಲ್ಲಿನ ಸ್ಥಳಿಯ ನಾಗರಿಕ ಕಲ್ಯಾಣ ಸಂಘದ ಪ್ರತಿನಿಧಿ ದೂ. 873557760 | ಸದಸ್ಯರು | |
| 7 | ಶ್ರೀ ಮೊಹಮದ್ ಮುಜಾಮೀಲ್ ವಾರ್ಡ್ ಪ್ರದೇಶದಲ್ಲಿನ ಸ್ಥಳಿಯ ನಾಗರಿಕ ಕಲ್ಯಾಣ ಸಂಘದ ಪ್ರತಿನಿಧಿ ದೂ. 7349649906 | ಸದಸ್ಯರು | |
| 8 | ಸಹಾಯಕ ಕಂದಾಯ ಅಧಿಕಾರಿ ರವರ ಪ್ರತಿನಿಧಿ ಚಂದ್ರಕಲಾ ದೂ. 8904845720 | ಸದಸ್ಯರು | |
| 9 | ಸಹಾಯಕ ಕಾರ್ಯಪಾಲಕ ಅಭಿಯಂತರರು (ಘ.ತ್ಯಾ.ನಿ) ರವರ ಪ್ರತಿನಿಧಿಎನ್.ಲಕ್ಷ್ಮಿ ನರಸಿಂಹಯ್ಯ ದೂ. 9845563157 | ಸದಸ್ಯರು | |
| 10 | ಸಹಾಯಕ ಕಾರ್ಯಪಾಲಕ ಅಭಿಯಂತರರ ( ಬಿಡಬ್ಲ್ಯೂ.ಎಸ್.ಎಸ್.ಬಿ) ರವರ ಪ್ರತಿನಿಧಿ ಹನುಮಂತ ರಾಜು 8618556909 | ಸದಸ್ಯರು | |
| 11 | ಸಹಾಯಕ ಕಾರ್ಯ ಪಾಲಕ ಅಭಿಯಂಣತರರು(ಬೇಸ್ಕಂ) ರವರ ಪ್ರತಿನಿಧಿ | ಸದಸ್ಯರು | |

ಕಾರ್ಯದರ್ಶಿಗಳು
ಸಹಾಯಕ ಅಭಿಯಂತರರು ವಾರ್ಡ್ ಸಂಖ್ಯೆ 136
ವಾರ್ಡ್ ಹಂತದ ಸಮಿತಿ

ಅಧ್ಯಕ್ಷರು
ಹಾಗೂ ನೋಡಲ್ ಅಧಿಕಾರಿ
ವಾರ್ಡ್ ಹಂತದ ಸಮಿತಿ, ವಾರ್ಡ್ ನಂ. 136

17/10/2020.

<u>ಪ್ರತಿಯನ್ನು</u>

1. ಜಂಟಿ ಆಯುಕ್ತರು ಪಶ್ಚಿಮ ರಚರ ಅವಗಾಹನೆಗೆ ಸಲ್ಲಿಸಿದೆ,
2. ಮುಖ್ಯ ಅಭಿಯಂತರರು ಪಶ್ಚಿಮ ರವರ ಮಾಹಿತಿಗೆ ಸಲ್ಲಿಸಿದೆ,
3. ಕಛೇರಿ ಕಡತಕ್ಕೆ

Scanned with CamScanner